# ಕರ್ನಾಟಕ ಲೋಕಾಯುಕ್ತ

**ನಂ.ಕಂಪ್ಲೆಂಟ್/ಉಪಲೋಕ್/ಬಿಡಿ-2569/2015/ಡಿಆರ್‌ಇ-1**

ಬಹುಮಹಡಿಗಳ ಕಟ್ಟಡ,
ಡಾ:ಅಂಬೇಡ್ಕರ್ ವೀದಿ,
ಬೆಂಗಳೂರು.
ದಿನಾಂಕ : 09/02/2017

## ಕರ್ನಾಟಕ ಲೋಕಾಯುಕ್ತ ಕಾಯಿದೆ, 1984 ರ ಕಲಂ 12(3) ರನ್ವಯ ವರದಿ

ವಿಷಯ: ಶ್ರೀ.ಟಿ.ಸಿದ್ದೇಶಪ್ಪ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ, ಯರಗನಾಳು ಗ್ರಾಮ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ, ಇವರ ವಿರುದ್ಧದ ನಡವಳಿ ಕುರಿತು.

******

1) ಶ್ರೀ.ಎಸ್.ಮಂಜುನಾಥ ಬಿನ್ ಸಣ್ಣಹನುಮಪ್ಪ, ಮಲ್ಲಿಗೇನಹಳ್ಳಿ ಗ್ರಾಮ, ಬೆಳಗುತ್ತಿ ಹೋಬಳಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ, (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ರವರು ಸರ್ಕಾರಿ/ಸಾರ್ವಜನಿಕ ನೌಕರರಾದ ಶ್ರೀ.ಟಿ.ಸಿದ್ದೇಶಪ್ಪ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ, ಯರಗನಾಳು ಗ್ರಾಮ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 9 ರಡಿಯಲ್ಲಿ ದತ್ತವಾದ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

2) ಈ ಪ್ರಕರಣದಲ್ಲಿ ದೂರುದಾರರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ 2012-13ನೇ ಸಾಲಿನಲ್ಲಿ ಮುಂಗಾರಿನಲ್ಲಿ ಬೆಳೆ ಹಾನಿಗೊಂಡ ರೈತರ ಪೈಕಿ ಮೊದಲನೇ ಕಂತಿನ 1967 ಫಲಾನುಭವಿಗಳ ಬಾಬ್ತು ರೂ.31,96,300/- ಹಾಗೂ 2ನೇ ಕಂತಿನ 105 ಫಲಾನುಭವಿಗಳ ಬಾಬ್ತು ರೂ.1,72,180/- ಪರಿಹಾರದ ಹಣವನ್ನು ಹೊನ್ನಾಳಿ ತಾಲ್ಲೂಕು ತಹಶೀಲ್ದಾರ್‌ರವರು ನೀಡಿದ್ದು, 2ನೇ ಕಂತಿನಲ್ಲಿ ಬಿಡುಗಡೆಯಾದ ಹಣದ ಶೇ.90 ರಷ್ಟು ಹಣವನ್ನು ಫಲಾನುಭವಿಗಳಿಗೆ ನೀಡದೆ ಎದುರುದಾರರು ದುರುಪಯೋಗ ಪಡಿಸಿಕೊಂಡಿರುತ್ತಾರೆ. ಈ ಬಗ್ಗೆ ಹೊನ್ನಾಳಿಯ ಸಹಾಯಕ ಕೃಷಿ ನಿರ್ದೇಶಕರು ಮತ್ತು ಹೊನ್ನಾಳಿ ತಾಲ್ಲೂಕು ತಹಶೀಲ್ದಾರ್‌ರವರಿಗೆ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಳ್ಳದೆ ಎದುರುದಾರರೊಂದಿಗೆ ಶಾಮೀಲಾಗಿರುತ್ತಾರೆ. ಈ ಬಗ್ಗೆ ತನಿಖೆ ಕೈಗೊಳ್ಳಬೇಕೆಂದು ಕೋರಿ ದೂರನ್ನು ಸಲ್ಲಿಸಿರುತ್ತಾರೆ.

3) ದೂರುದಾರರ ದೂರಿನ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ದಾವಣಗೆರೆ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಿಗೆ ಆದೇಶಿಸಲಾಗಿತ್ತು. ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ,

ದಾವಣಗೆರೆ ಇವರು ವರದಿಯನ್ನು ಸಲ್ಲಿಸಿದ್ದು, ವರದಿಯಲ್ಲಿ ಶ್ರೀ.ಸಿದ್ದೇಶ್, ಮುಖ್ಯ ಕಾರ್ಯದರ್ಶಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಯರಗನಾಳು ಇವರಿಗೆ 2012-13ನೇ ಸಾಲಿನಲ್ಲಿ ಬೆಳಗುತ್ತಿ ಹೋಬಳಿಯಲ್ಲಿನ ಜಮೀನುಗಳಲ್ಲಿ ಹಾಳಾದ ಬೆಳೆಗಳಿಗೆ ಸರ್ಕಾರದಿಂದ ಮಂಜೂರಾದ ಬೆಳೆ ಪರಿಹಾರದ ಮೊತ್ತವನ್ನು ವಿತರಣೆ ಮಾಡಲು ಹೊನ್ನಾಳಿ ತಹಶೀಲ್ದಾರ್ ಹಾಗೂ ಸಹಾಯಕ ಕೃಷಿ ನಿರ್ದೇಶಕರು ವಹಿಸಿದ್ದು, ಸದರಿಯವರು ಸಂಬಂಧಪಟ್ಟ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನಿಯಮಾನುಸಾರ ಬೆಳೆ ಪರಿಹಾರ ಮೊತ್ತವನ್ನು ಜಮಾ ಮಾಡದೆ ನೇರವಾಗಿ ಫಲಾನುಭವಿಗಳಿಗೆ ನಗದಾಗಿ ವಿತರಿಸಿ ಒಟ್ಟು ರೂ.25,920/- ಬೆಳೆ ಪರಿಹಾರದ ಮೊತ್ತವನ್ನು ದುರುಪಯೋಗ ಪಡಿಸಿಕೊಂಡಿರುವುದು ವಿಚಾರಣಾ ಕಾಲದಲ್ಲಿ ಫಲಾನುಭವಿ/ವಾರಸುದಾರರು ನೀಡಿದ ಹೇಳಿಕೆಗಳಿಂದ ಮೇಲ್ನೋಟಕ್ಕೆ ಕಂಡುಬಂದಿರುತ್ತದೆಯೆಂದು ಹೇಳಿರುತ್ತಾರೆ.

4) ತನಿಖಾಧಿಕಾರಿಯ ವರದಿಯ ಮೇಲೆ ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸಿದ್ದು, ಆಕ್ಷೇಪಣೆಯಲ್ಲಿ 13 ಜನ ಫಲಾನುಭವಿಗಳ ಪೈಕಿ 11 ಜನ ಚೆಕ್ ಲಿಸ್ಟ್‌ನಲ್ಲಿ ಸಹಿ ಮಾಡಿ ಹಣವನ್ನು ಪಡೆದಿರುತ್ತಾರೆ. ಇನ್ನಿಬ್ಬರು ಫಲಾನುಭವಿಗಳ ಹಣವನ್ನು ತಹಶೀಲ್ದಾರ್, ಹೊನ್ನಾಳಿ ಇವರಿಗೆ ವಾಪಸ್ಸು ಕಳುಹಿಸಲಾಗಿದೆ. ಫಲಾನುಭವಿಗಳ ಹೇಳಿಕೆಯನ್ನು ಹೊನ್ನಾಳಿ ಪ್ರವಾಸಿ ಮಂದಿರದಲ್ಲಿ ಪಡೆಯಲಾಗಿದೆ. ಹಣ ಪಡೆಯಲು ವಂಶವೃಕ್ಷ, ಮರಣ ದಾಖಲೆ ಮತ್ತು ಮತದಾರರ ಚೀಟಿಯನ್ನು ಕೊಟ್ಟಿರುತ್ತಾರೆ. ಆದರೂ ವೈಯಕ್ತಿಕ ಕಾರಣಗಳಿಂದ ಸುಳ್ಳು ಹೇಳಿರುತ್ತಾರೆಂದು ಹೇಳಿರುತ್ತಾರೆ.

5) ತನಿಖಾಧಿಕಾರಿಯ ವರದಿಯನ್ನು ಪರಿಶೀಲಿಸಿದಾಗ, ರೈತರ ಪರಿಹಾರ ಹಣವನ್ನು ಫಲಾನುಭವಿಗಳ ಖಾತೆಗೆ ಜಮಾ ಮಾಡಲು ನಿಯಮವಿದ್ದರೂ ಸಹ ಎದುರುದಾರರು ಅದನ್ನು ಉಲ್ಲಂಘಿಸಿ ನಗದಾಗಿ ಸಹಾಯ ಧನವನ್ನು ನೀಡಿರುವುದು ಕಂಡುಬರುತ್ತದೆ. ಅದಲ್ಲದೆ ಕೆಲವು ಫಲಾನುಭವಿಗಳಿಗೆ ಸುಳ್ಳು ಹೆಬ್ಬೆಟು ಮತ್ತು ಸಹಿಗಳನ್ನು ಹಾಕಿಸಿ ನಿಜವಾದ ಫಲಾನುಭವಿಗಳಿಗೆ ಸಹಾಯ ಧನ ತಲುಪದೆ ಸಹಾಯ ಧನ ನೀಡಲಾಗಿದೆಯೆಂದು ದಾಖಲಾತಿ ಸೃಷ್ಟಿಸಿರುವುದು ಕೂಡ ಕಂಡುಬರುತ್ತದೆ. ಮೇಲಿನ ಅಂಶಗಳನ್ನು ಗಮನಿಸಿದಾಗ, ಪರಿಹಾರದ ಹಣವನ್ನು ಫಲಾನುಭವಿಗಳಿಗೆ ನೀಡಲು ಎದುರುದಾರರ ಸುಪರ್ದಿಗೆ ನೀಡಿದ್ದು, ಅದನ್ನು ಅವರು ಸೂಕ್ತ ರೀತಿಯಲ್ಲಿ ಫಲಾನುಭವಿಗಳಿಗೆ ತಲುಪಿಸಲು ವಿಫಲರಾಗಿದ್ದು, ಸದರಿ ಪರಿಹಾರ ಮೊತ್ತದಲ್ಲಿ ಅವ್ಯವಹಾರ ನಡೆಸಿರುವುದು ಮತ್ತು ಕಾನೂನು ಹಾಗೂ ನಿಯಮ ಉಲ್ಲಂಘನೆ ನಡೆಸಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದ್ದರಿಂದ, ಎದುರುದಾರರ ವಿರುದ್ಧ ಶಿಸ್ತು ಕ್ರಮದ ಜೊತೆಗೆ ದುರುಪಯೋಗವಾಗಿರುವ ಹಣವನ್ನು ವಸೂಲಾತಿ ಮಾಡುವುದು ಕೂಡ ಅವಶ್ಯವಿರುತ್ತದೆ.

6) ತನಿಖಾಧಿಕಾರಿಯವರು ತಮ್ಮ ವರದಿಯಲ್ಲಿ ರೂ.25,920/- ಬೆಳೆ ಪರಿಹಾರದ ಮೊತ್ತವನ್ನು ದುರುಪಯೋಗವಾಗಿದೆಯೆಂದು ಹೇಳಿದ್ದು, ಹಣ ದುರುಪಯೋಗದ ಬಗ್ಗೆ ಎದುರುದಾರರು

ನೀಡಿರುವ ಆಕ್ಷೇಪಣೆ ಸಮಂಜಸವಾಗಿರುವುದಿಲ್ಲ. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಹಣ ದುರುಪಯೋಗದ ಬಗ್ಗೆ ಸೂಕ್ತವಾದ ಮತ್ತು ಸಮಂಜಸವಾದ ಸಮಜಾಯಿಷಿಯನ್ನು ನೀಡಿರುವುದಿಲ್ಲ. ಆದ್ದರಿಂದ, ದೂರುದಾರರು ಮಾಡಿರುವ ಆಪಾದನೆಯನ್ನು ಅಲ್ಲಗಳೆಯಲು ಬರುವುದಿಲ್ಲ. ದೂರುದಾರರ ದೂರು ಹಾಗೂ ತನಿಖಾಧಿಕಾರಿಯ ವರದಿಯನ್ನು ಪರಿಶೀಲಿಸಿದಾಗ, ಎದುರುದಾರರು ಕರ್ತವ್ಯಲೋಪ ಎಸಗಿರುವುದು ಹಾಗೂ ಅಧಿಕಾರ ಮತ್ತು ಹಣ ದುರುಪಯೋಗ ಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆ ಕಾರಣದಿಂದಾಗಿ ಎದುರುದಾರರು ಶಿಸ್ತು ಕ್ರಮಕ್ಕೆ ಭಾದ್ಯಸ್ಥರಾಗಿರುತ್ತಾರೆ.

7) ಎದುರುದಾರರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ, ಕರ್ತವ್ಯಲೋಪವೆಸಗಿ, ದುರ್ವರ್ತನೆ ತೋರಿಸಿ, ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ 1966 ರ ನಿಯಮ 3(1)(ii) ಮತ್ತು (iii) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡುಬಂದಿದ್ದರಿಂದ, ಎದುರುದಾರರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14–ಎ ಅಡಿಯಲ್ಲಿ, ಎದುರುದಾರರ ವಿರುದ್ಧ ವಿಚಾರಣೆ ನಡೆಸಲು, ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ, ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿದೆ.

8) ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(4) ರ ಪ್ರಕಾರ, ಶಿಸ್ತು ಪ್ರಾಧಿಕಾರವು ವರದಿಯಂತೆ ಕ್ರಮ ಕೈಗೊಂಡು ಅಥವಾ ಕೈಗೊಳ್ಳಬಹುದಾದ ಕ್ರಮವನ್ನು ಈ ವರದಿ ತಲುಪಿದ ದಿನಾಂಕದಿಂದ **ಮೂರು ತಿಂಗಳೊಳಗಾಗಿ** ಈ ಪ್ರಾಧಿಕಾರಕ್ಕೆ ತಿಳಿಸಲೂ ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

Sd/- 10/2/17.

(ನ್ಯಾಯಮೂರ್ತಿ ಸುಭಾಷ್ ಬಿ. ಆಡಿ)
ಉಪಲೋಕಾಯುಕ್ತರು–2,
ಕರ್ನಾಟಕ ರಾಜ್ಯ, ಬೆಂಗಳೂರು.